ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

(3)

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 26/12/20

# ಜನವರಿ ಮೊದಲ ವಾರದಲ್ಲಿ ವಿಶೇಷ ಅಧಿವೇಶನ?



ವಿಶ್ವವಾಣಿ ವಿಶೇಷ ಬೆಂಗಳೂರು 24-12-20

ವಿಧಾನಪರಿಷತ್ ಸಭಾಪತಿ ಅವಿಶ್ವಾಸ ನಿರ್ಣಯಕ್ಕೆ ಸಂಬಂಧಿಸಿದಂತೆ ತಾರ್ಕಿಕ ಅಂತ್ಯದವರೆಗೆ ತೆಗೆದುಕೊಂಡು ಹೋಗಲು ಹಾಗೂ ಪ್ರತಾಪ್‌ಚಂದ್ರಶೆಟ್ಟಿ ಅವರನ್ನು ಕೆಳಕ್ಕೆ ಇಳಿಸಲು ಸಿದ್ಧತೆ ಆರಂಭಿಸಿದ್ದು, ಇದಕ್ಕೆ ಜನವರಿ ಮೊದಲ ವಾರದಲ್ಲಿ ವೇದಿಕೆ ಸಿದ್ಧಗೊಳಿಸಿದ್ದಾರೆ.

ಚಳಿಗಾಲದ ಅಧಿವೇಶನದಲ್ಲಿ ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಅರ್ಜಿ ಸಲ್ಲಿಸಿದ್ದರೂ, ಅದನ್ನು ಮಂಡಿಸಲು ಅವಕಾಶ ನೀಡಿರಲಿಲ್ಲ. ಬಳಿಕ ರಾಜ್ಯಪಾಲರ ನಿರ್ದೇಶನದ ಮೇರೆಗೆ ಪರಿಷತ್‌ನಲ್ಲಿ ವಿಶೇಷ ಅಧಿವೇಶನ ನಡೆಸಲಾಗಿತ್ತು. ಆದರೆ ಸಭಾಪತಿ ಕುರ್ಚಿಗಾಗಿ ಭಾರಿ ಕಾಳಗ ನಡೆದಿದ್ದರಿಂದ ಇತ್ಯರ್ಥವಾಗಿರಲಿಲ್ಲ.



ಆದರೀಗ ಪುನಃ ಸಭಾಪತಿ ಅವಿಶ್ವಾಸ ನಿರ್ಣಯವನ್ನು ಮಂಡಿಸುವುದಕ್ಕಾಗಿಯೇ, ವಿಶೇಷ ಅಧಿವೇಶನ ಕರೆಯಲು ಸಚಿವ ಸಂಪುಟ ಸಭೆಯಲ್ಲಿ ನಿರ್ಣಯ ಕೈಗೊಳ್ಳಲು ನಿರ್ಧರಿಸಿದೆ ಎಂದು ಮೂಲಗಳು ತಿಳಿಸಿವೆ.

ಸಚಿವ ಸಂಪುಟ ಸಭೆ ಸೋಮವಾರ ನಡೆಸಲು ತೀರ್ಮಾನಿಸಲಾಗಿದೆ. ಈ ಸಭೆಯಲ್ಲಿ ಪ್ರಮುಖವಾಗಿ ವಿಶೇಷ ಅಧಿವೇಶನ ಕರೆಯಲು ನಿರ್ಣಯ ಕೈಗೊಳ್ಳುವ ತೀರ್ಮಾನವನ್ನು ತೆಗೆದುಕೊಳ್ಳಲು ನಿರ್ಧರಿಸಲಾಗಿದೆ. ಇದರೊಂದಿಗೆ ಎಷ್ಟು ದಿನದ ಮಟ್ಟಿಗೆ ಈ ಅಧಿವೇಶನ ಕರೆಯಬೇಕು ಎನ್ನುವ ಬಗ್ಗೆಯೂ ಇದೇ ಸಮಯದಲ್ಲಿ ನಿರ್ಧರಿಸುವ ಸಾಧ್ಯತೆಯಿದೆ ಎಂದು ತಿಳಿದುಬಂದಿದೆ.

**ಜಂಟಿ ಅಧಿವೇಶನಕ್ಕೂ ಮೊದಲು ನೂತನ ಸ್ಪೀಕರ್:** ಬಜೆಟ್ ಅಧಿವೇಶನಕ್ಕೆ ಮೊದಲು ನಡೆಯುವ ಜಂಟಿ ಅಧಿವೇಶನದ ವೇಳೆಗೆ ಪರಿಷತ್‌ನಲ್ಲಿ ಬಿಜೆಪಿಯ ಒಬ್ಬರನ್ನು ಸಭಾಪತಿಗಳನ್ನಾಗಿ ಕೂರಿಸಲು ಸರಕಾರ ಸಿದ್ಧತೆ ನಡೆಸಿಕೊಂಡಿದೆ. ರಾಜ್ಯಪಾಲರು ಜಂಟಿ ಅಧಿವೇಶನವನ್ನು ಉದ್ದೇಶಿಸಿ ಭಾಷಣ ಮಾಡುವ ವೇಳೆಗೆ ಸಭಾಪತಿಗಳ ಬದಲಾವಣೆಗೆ ತೀರ್ಮಾನಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ವಿಶೇಷ ಅಧಿವೇಶನ ಕರೆದಾಗ ಗೋಹತ್ಯೆ ನಿಷೇಧ ವಿಧೇಯಕ ವಿಷಯಕ್ಕೆ ಸಂಬಂಧಿಸಿದಂತೆ ಬಿಲ್ ಮಂಡಿಸಲು ಕಾಂಗ್ರೆಸ್ ಪಟ್ಟು ಹಿಡಿಯುವ ಸಾಧ್ಯತೆಯಿದೆ. ಆದರೆ ಬಿಜೆಪಿ ನಾಯಕರು ಮೊದಲ ದಿನದಿಂದಲೇ, ಸಭಾಪತಿಗಳ ಅವಿಶ್ವಾಸ ನಿರ್ಣಯದ ಮೇಲೆ ಪಟ್ಟುಹಿಡಿಯಲು ನಿರ್ಧರಿಸಿದ್ದಾರೆ. ಕಳೆದ ಬಾರಿಯಂತೆ ಈ ಬಾರಿ ಗದ್ದಲವೆಬ್ಬಿಸದೇ, ವಾಗ್ಬಾಣದ ಮೂಲಕ ಟೀಕಾಪ್ರಹಾರ ನಡೆಸುವ ಪರಿಷತ್ ಸದಸ್ಯರಿಗೆ ಸೂಚನೆ ನೀಡುವ ಸಾಧ್ಯತೆಯಿದೆ ಎಂದು ತಿಳಿದುಬಂದಿದೆ.

## ಕಾನೂನು ಹೋರಾಟ ಅಗತ್ಯವಿಲ್ಲ

ಸಭಾಪತಿಗಳು ತಮ್ಮ ಸ್ಥಾನದಿಂದ ಕೆಳಗೆ ಇಳಿಯದಿದ್ದರೆ ಕಾನೂನು ಹೋರಾಟ ನಡೆಸುವ ಲೆಕ್ಕಾಚಾರದಲ್ಲಿ ಬಿಜೆಪಿ ನಾಯಕರಿದ್ದರು. ಆದರೆ ಶೆಟ್ಟಿ ಅವರೇ ಮಾನಸಿಕವಾಗಿ ಈಗಾಗಲೇ ರಾಜೀನಾಮೆಗೆ ಸಜ್ಜಾಗಿರುವುದರಿಂದ, ಈ ಹಂತದಲ್ಲಿ ನ್ಯಾಯಾಲಯದ ಮೊರೆ ಹೋಗುವ ಅಗತ್ಯವಿಲ್ಲ ಎನ್ನುವ ಮಾತುಗಳು ಬಿಜೆಪಿ ವಲಯದಲ್ಲಿ ಕೇಳಿಬಂದಿದೆ. ಈ ಸಂಬಂಧ 'ವಿಶ್ವವಾಣಿ'ಯೊಂದಿಗೆ ಮಾತನಾಡಿದ ಹಿರಿಯ ಬಿಜೆಪಿ ಪರಿಷತ್ ಸದಸ್ಯರೊಬ್ಬರು, ಈಗಾಗಲೇ ಪ್ರತಾಪ್ ಚಂದ್ರ ಶೆಟ್ಟಿ ಅವರು ಮಾನಸಿಕವಾಗಿ ಕುಗ್ಗಿದ್ದಾರೆ. ಈ ಹಂತದಲ್ಲಿ ಪುನಃ ಕೋರ್ಟ್‌ಗೆ ಹೋದರೆ ಇನ್ನಷ್ಟು ಬೇಸರವಾಗುತ್ತದೆ. ಹೇಗಿದ್ದರು ಅವರು ರಾಜೀನಾಮೆಗೆ ಸಿದ್ಧವಾಗಿರುವುದರಿಂದ, ನ್ಯಾಯಾಲಯದ ಮೊರೆ ಹೋಗದಿರಲು ನಿರ್ಧರಿಸಲಾಗಿದೆ ಎಂದಿದ್ದಾರೆ.